ಡಾ: ಜಿ. ಪರಮೇಶ್ವರ ಉನ್ನತ ಶಿಕ್ಷಣ, ವಿಜ್ಞಾನ ಮತ್ತು ತಂತ್ರಜ್ಞಾನ ರಾಜ್ಯ ಸಚಿವರು) :—

ಅ) ಬೆಳಗಾಂ ಜಿಲ್ಲೆಯ ಬೆಳವಾಡಿಯಲ್ಲಿ ಒಂದು ಸರ್ಕಾರಿ ಪಾಲಿಟೆಕ್ನಿಕ್ ಪ್ರಾರಂಭಿಸುವ ಕುರಿತು ಎ.ಐ.ಸಿ.ಟಿ.ಇ ನವದೆಹಲಿಗೆ ಪ್ರಸ್ತಾವನೆಯನ್ನು ಕಳುಹಿಸಲಾಗಿತ್ತು. ಈ ದಿಸೆಯಲ್ಲಿ ಸದರಿ ಪಾಲಿಟೆಕ್ನಿಕ್‌ಗೆ ಭೂಮಿ, ಕಟ್ಟಡ ಹಾಗೂ ಫಂಡ್ಸ್ ಇತರೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿಕೊಂಡು ವಿವರ ನೀಡಲು ಎ.ಐ.ಸಿ.ಟಿ.ಇ, ನವದೆಹಲಿ ರವರು ರಾಜ್ಯ ಸರ್ಕಾರಕ್ಕೆ ಕೇಳಿರುತ್ತಾರೆ. ಈ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ತಾಂತ್ರಿಕ ಶಿಕ್ಷಣ ಇಲಾಖಾ ವತಿಯಿಂದ ಯಾವುದೇ ಕಟ್ಟಡ ನಿರ್ಮಿಸಿಲ್ಲ.

ಇ) ಉದ್ಭವಿಸುವುದಿಲ್ಲ.

ಬೆಳಗಾಂ ಜಿಲ್ಲೆಯಲ್ಲಿರುವ ಸರ್ಕಾರಿ ಹಾಗೂ ಖಾಸಗಿ ಶಾಲೆಗಳಿಗೆ ಕುಡಿಯುವ ನೀರಿನ ಸೌಲಭ್ಯ

2562(2960) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಸರ್ಕಾರಿ ಹಾಗೂ ಖಾಸಗಿ ಪ್ರಾಥಮಿಕ ಮಾಧ್ಯಮಿಕ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಶುದ್ಧವಾದ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ವಿದ್ಯಾರ್ಥಿಗಳಿಗೆ ಶುದ್ಧವಾದ ಕುಡಿಯುವ ನೀರನ್ನು ಪೂರೈಸಲು ಯಾವ ಯೋಜನೆಯನ್ನು ಹಾಕಿಕೊಂಡಿದೆ;

ಇ) ಪ್ರತಿಯೊಂದು ಶಾಲಾ ಆವರಣದಲ್ಲಿ ಕೊಳವೆಬಾವಿಗಳನ್ನು ತೋಡಿಸಿ, ವಿದ್ಯಾರ್ಥಿಗಳಿಗೆ ಶುದ್ಧವಾದ ನೀರನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ;

ಈ) ಬೆಳಗಾಂವ ಜಿಲ್ಲೆಯಲ್ಲಿ ಎಷ್ಟು ಶಾಲೆಯಲ್ಲಿ ಶುದ್ಧ ಕುಡಿಯುವ ನೀರಿನ ಅನುಕೂಲತೆ ಇರುವುದು ಹಾಗೂ ಎಷ್ಟು ಶಾಲೆಯಲ್ಲಿ ಈ ಸೌಲಭ್ಯ ಇರುವುದಿಲ್ಲ; (ತಾಲ್ಲೂಕುವಾರು ವಿವರ ನೀಡುವುದು)

ಉ) ಬೆಳಗಾಂವ ಜಿಲ್ಲೆ ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ಎಷ್ಟು ಶಾಲೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇರುವುದು; ಎಷ್ಟು ಶಾಲೆಗಳಲ್ಲಿ ಈ ವ್ಯವಸ್ಥೆ ಇರುವುದಿಲ್ಲ; (ವಿವರ ನೀಡುವುದು)

ಊ) ಆದ್ಯತೆಯ ಮೇಲೆ ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ತೋಡಲು ಕ್ರಮ ಕೈಗೊಳ್ಳಲಾಗುವುದೇ ಹಾಗೂ ಎಷ್ಟು ಹಣ ಬೇಕಾಗುವುದು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) : -

ಅ) ರಾಜ್ಯದ ಹಲವಾರು ಸರ್ಕಾರಿ ಪ್ರಾಥಮಿಕ ಹಾಗೂ ಮಾಧ್ಯಮಿಕ ಶಾಲೆಗಳಲ್ಲಿ ಕುಡಿಯುವ ನೀರಿನ ಸೌಲಭ್ಯವಿಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ವಿದ್ಯಾರ್ಥಿಗಳಿಗೆ ಅವರ ಶಾಲೆಯ ಸಮೀಪದಲ್ಲಿ ಲಭ್ಯವಿರುವ ಮೂಲಗಳಿಂದ ಶುದ್ಧ ನೀರನ್ನು ಒದಗಿಸಲಾಗುತ್ತಿದೆ. ೧೯೯೫-೯೬ ರಿಂದ ೨೦೦೦-೦೧ ರವರೆಗೂ ರಾಜ್ಯ ವಲಯ ಯೋಜನೆಯಡಿಯಲ್ಲಿ ಹಂತಹಂತವಾಗಿ ೧೨೦೭ ಶಾಲೆಗಳಿಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲಾಗಿದೆ.

ಇ) ಎಲ್ಲಾ ಶಾಲೆಗಳಲ್ಲಿ ಕೊಳವೆ ಬಾವಿ ತೋಡಿಸುವುದು ಕಾರ್ಯಸಾಧ್ಯವಿಲ್ಲ. ಆದರೂ ರಾಜ್ಯದ ಆರ್ಥಿಕ ಸ್ಥಿತಿ ಆಧರಿಸಿ ಹಂತಹಂತವಾಗಿ ಕುಡಿಯುವ ನೀರಿನ ಕೊರತೆ ಇರುವ ಶಾಲೆಗಳಿಗೆ ನೀರಿನ ಸೌಲಭ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು.

ಈ) ನೀರಿನ ವ್ಯವಸ್ಥೆ ಇರುವ ಶಾಲೆಗಳ ಸಂಖ್ಯೆ : ೧೮೭೭ ತಾಲ್ಲೂಕುವಾರು ಮಾಹಿತಿ ನೀರಿನ ವ್ಯವಸ್ಥೆ ಇಲ್ಲದಿರುವ ಶಾಲೆಗಳ ಸಂಖ್ಯೆ : ೧೦೪೨ ಅನುಬಂಧ - ೧ ರಲ್ಲಿ ಲಗತ್ತಿಸಿದೆ.

ಊ)	ತಾ: ಬೈಲಹೊಂಗಲ	ಸವದತ್ತಿ
ನೀರಿನ ವ್ಯವಸ್ಥೆ ಇರುವ ಶಾಲೆಗಳ ಸಂಖ್ಯೆ	೧೨೨	೧೬೧
ನೀರಿನ ವ್ಯವಸ್ಥೆ ಇಲ್ಲದಿರುವ ಶಾಲೆಗಳ ಸಂಖ್ಯೆ	೯೧	೪೭

ಊ) ಸದ್ಯಕ್ಕೆ ಈ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. ಅಂದಾಜು ರೂ. ೭೦.೦೦ ಲಕ್ಷ ಹಣ ಬೇಕಾಗುತ್ತದೆ.

ಬೈಲಹೊಂಗಲ ತಾಲ್ಲೂಕಿನ ನೇಸರಗಿ ಗ್ರಾಮದಲ್ಲಿ ಹೆರಿಗೆ ಆಸ್ಪತ್ರೆಯ ಕಟ್ಟಡ ಕಟ್ಟಿಸುವುದು

2563 (2961) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : - ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.